ಔರಾದ್ ತಾಲ್ಲೂಕಿನಲ್ಲಿ ನವಗ್ರಾಮ ಯೋಜನೆ ಅಡಿಯಲ್ಲಿ ಮನೆಗಳ ನಿರ್ಮಾಣ

4075 (4741) : ಶ್ರೀ ಗುಂಡಪ್ಪ ವಕೀಲ್ (ಔರಾದ) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಔರಾದ್ ತಾಲ್ಲೂಕಿನಲ್ಲಿ ನವಗ್ರಾಮ ಯೋಜನೆಯಡಿಯಲ್ಲಿ ವಸತಿ ಇಲಾಖೆ ಮಂಜೂರಾತಿಯಂತೆ 400 ಫಲಾನುಭವಿಗಳನ್ನು 12 ಗ್ರಾಮಗಳಲ್ಲಿ ಆಯ್ಕೆ ಮಾಡಿ, ಆಶ್ರಯ ಸಮಿತಿ ವತಿಯಿಂದ ಪಟ್ಟಿ ಸಲ್ಲಿಸಿದ್ದು, 8 ತಿಂಗಳಾದರೂ ಮನೆಗಳ ನಿರ್ಮಾಣ ಕುರಿತು ಯಾವುದೇ ಕ್ರಮ ಕೈಗೊಳ್ಳದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಸದರಿ ಮನೆಗಳ ನಿರ್ಮಾಣಕ್ಕೆ ಬೇಕಾದ ಜಮೀನು ಖರೀದಿಸಿ ಬಡಾವಣೆ ಮಾಡಿದ್ದು, ರಸ್ತೆ ನಿರ್ಮಾಣ ಕಾರ್ಯ ಪೂರೈಸಿದ್ದರೂ ಸಹ ಮನೆಗಳ ನಿರ್ಮಾಣ ಕಾರ್ಯ ಪ್ರಾರಂಭಿಸದಿರುವ ವಿಷಯ ಸರ್ಕಾರಕ್ಕೆ ತಿಳಿದಿದೆಯೇ;

ಇ) ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮವೇನು?

ಶ್ರೀ ಸಿ.ಆರ್. ಸಗೀರ್ ಅಹಮದ್ (ವಸತಿ ಸಚಿವರು):

ಅ) ಹೌದು

ಆ) ಹೌದು

ಇ) ಕಮಲಾನಗರ ಮತ್ತು ಸಚಿತಪೂರ ಗ್ರಾಮಗಳಲ್ಲಿ ಮಾತ್ರ ಜಮೀನು ಸರ್ಕಾರದ ಹೆಸರಿನಲ್ಲಿ ನೊಂದಾಯಿಸಿದ್ದು ಬಡಾವಣೆ ಸಿದ್ಧಗೊಳಿಸಲಾಗಿದೆ. ಹಾಗೂ ಉಳಿದ ಎಲ್ಲಾ ಸೌಲಭ್ಯಗಳು ಒದಗಿಸಲು ಗ್ರಾಮಪಂಚಾಯತಿಯವರು ಠರಾವು ಪಾಸು ಮಾಡಿ ಕೊಟ್ಟಿರುತ್ತಾರೆ. ಸಂತಪೂರ ಗ್ರಾಮದ 100 ಮತ್ತು ಕಮಲನಗರ ಗ್ರಾಮದ 100 ಫಲಾನುಭವಿಗಳಿಗೆ ಮನೆ ಕಟ್ಟಿಕೊಳ್ಳಲು ಗ್ರಾಮಪಂಚಾಯತಿಯವರ ಮುಖಾಂತರ ಈಗಾಗಲೇ ತಿಳಿಸಲಾಗಿದೆ. ಈ ಎರಡೂ ಗ್ರಾಮಗಳ ಫಲಾನುಭವಿಗಳ ದಾಖಲೀಕರಣ ಮುಕ್ತಾಯದ ಹಂತದಲ್ಲಿದ್ದು, ಅತಿ ಶೀಘ್ರದಲ್ಲಿ ಮನೆಗಳ ಕಾರ್ಯ ಪ್ರಾರಂಭಿಸಲಾಗುವುದು.

ಬಿಸಿಯೂಟದಲ್ಲಿ ನಡೆಯುತ್ತಿರುವ ಅವ್ಯವಹಾರಗಳನ್ನು ತಡೆಗಟ್ಟುವ ಬಗ್ಗೆ

4076 (4743) : ಶ್ರೀ ಗುಂಡಪ್ಪ ವಕೀಲ್ (ಔರಾದ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಿಸಿ ಬಿಸಿ ಮಧ್ಯಾಹ್ನದ ಊಟದಲ್ಲಿ ಸಂಭವಿಸುವ ಅನಾಹುತ ಹಾಗೂ ಅವ್ಯವಹಾರಗಳನ್ನು ತಡೆಯಲು, ಸರ್ಕಾರ ಶಾಸಕರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮಟ್ಟದ ಸಮಿತಿ ರಚಿಸುವ ಬಗ್ಗೆ ಚಿಂತನೆ ನಡೆಸಿದೆಯೇ?

ಆ) ಅವ್ಯವಹಾರಗಳನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು?

ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಅಕ್ಷರ ದಾಸೋಹ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಜಿಲ್ಲಾ ಉಸ್ತುವಾರಿ ಮಂತ್ರಿಗಳ ನೇತೃತ್ವದಲ್ಲಿ ಜಿಲ್ಲಾಮಟ್ಟದ ಅನುಷ್ಠಾನ ಸಮಿತಿಗಳನ್ನು ಈಗಾಗಲೇ ರಚಿಸಲಾಗಿದೆ. ಇದರಲ್ಲಿ ಜಿಲ್ಲೆ ಎಲ್ಲಾ ವಿಧಾನ ಸಭಾ ಹಾಗೂ ವಿಧಾನ ಪರಿಷತ್ ಸದಸ್ಯರುಗಳಿಗೆ ಈ ಸಮಿತಿಯ ಸದಸ್ಯರುಗಳನ್ನಾಗಿ ನೇಮಿಸಿದೆ. ತಾಲ್ಲೂಕು ಮಟ್ಟದಲ್ಲಿ ಅನುಷ್ಠಾನ ಸಮಿತಿಗಳನ್ನು ರಚಿಸುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ.